# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2022-23: 4305 ದಿನಾಂಕ:08.12.2022

## ಸುತ್ತೋಲೆ

ವಿಷಯ: ದಿನಾಂಕ 09.12.2022 ರಂದು ಸ್ನಾತಕ ಇಂಗ್ಲಿಷ್ ಅಧ್ಯಾಪಕರಿಗೆ ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಿರುವ ಕುರಿತು.

ಉಲ್ಲೇಖ: 1) ಈ ಕಚೇರಿ ಸುತ್ತೋಲೆ ಸಂಖ್ಯೆ:ತುವಿ:ಶೈವಿ:2022-23:4027 ದಿನಾಂಕ 21.11.2022

2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ 08.12.2022

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ಶಿಕ್ಷಣ ನೀತಿ-2020ರ ಅನ್ವಯ ವಿವಿಧ ಸ್ನಾತಕ ಪದವಿಗಳ 3 ಮತ್ತು 4ನೇ ಸೆಮಿಸ್ಟರ್ ಪಠ್ಯಕ್ರಮಗಳನ್ನು ಪರಿಷ್ಕರಿಸಲಾಗಿದ್ದು, ತತ್ಸಂಬಂಧ ವಿಷಯವಾರು ಬೋಧಕರುಗಳು ಕಡ್ಡಾಯವಾಗಿ ಸದರಿ ಕಾರ್ಯಾಗಾರದಲ್ಲಿ ಭಾಗವಹಿಸುವಂತೆ ಉಲ್ಲೇಖ(1)ರ ಪತ್ರದಲ್ಲಿ ತಿಳಿಸಲಾಗಿತ್ತು.

ಈ ಸಂಬಂಧ, ದಿನಾಂಕ 09.12.2022ರಂದು ಸ್ನಾತಕ ಇಂಗ್ಲಿಷ್ ವಿಷಯದ ಕಾರ್ಯಾಗಾರವನ್ನು ವಿಶ್ವವಿದ್ಯಾನಿಲಯದ ಡಾ. ಪಿ. ಸದಾನಂದಮಯ್ಯ ಕಟ್ಟಡದ ಸಭಾಂಗಣದಲ್ಲಿ ಬೆಳಿಗ್ಗೆ 10 ಗಂಟೆಗೆ ಆಯೋಜಿಸಲಾಗಿದ್ದು, ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಸ್ನಾತಕ ಇಂಗ್ಲಿಷ್ ವಿಷಯದ ಬೋಧಕರು ಸದರಿ ಕಾರ್ಯಾಗಾರದಲ್ಲಿ ತಪ್ಪದೇ ಪಾಲ್ಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ,

Mangalahouri H.

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ
ತುಮಕೂರು

ಗೆ,

ಪ್ರಾಂಶುಪಾಲರು, ಘಟಕ ಮತ್ತು ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು - ಸ್ನಾತಕ ಇಂಗ್ಲಿಷ್ ವಿಷಯದ ಬೋಧಕರುಗಳು ಕಾರ್ಯಾಗಾರದಲ್ಲಿ ಭಾಗವಹಿಸಲು ಕ್ರಮ ವಹಿಸುವುದು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಾರ್ಯಪಾಲಕ ಅಭಿಯಂತರರು, ಇಂಜಿನಿಯರಿಂಗ್ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ನಿರ್ದೇಶಕರು, IQAC ಘಟಕ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
5. ಪ್ರೊ. ಶಿವಲಿಂಗಸ್ವಾಮಿ ಹೆಚ್ ಕೆ, ಅಧ್ಯಕ್ಷರು, ಸ್ನಾತಕ ಇಂಗ್ಲಿಷ್ ಅಧ್ಯಯನ ಮಂಡಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ಸಿಸ್ಟಂ ಅನಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. - ಪ್ರಾಂಶುಪಾಲರು, ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ಇವರಿಗೆ ಇ-ಮೇಲ್ ಕಳುಹಿಸುವುದು ಮತ್ತು ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
7. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
8. ಕಚೇರಿ ಪ್ರತಿ.